## 45. ಕಾರ್ಗಿಲ್ ವಿಜಯ್ ದಿವಸ: ದೇಶಕ್ಕಾಗಿ ಮಡಿದ ಯೋಧರಿಗೆ ಗೌರವ ಸಲ್ಲಿಸಿದ ಮುಖ್ಯಮಂತ್ರಿ

'ಕಾರ್ಗಿಲ್ ಯುದ್ಧದಲ್ಲಿ ಹುತಾತ್ಮರಾದ ಯೋಧರ ಕುಟುಂಬಗಳೊಂದಿಗೆ ನಾವಿದ್ದೇವೆ' ಎಂದು ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ತಿಳಿಸಿದರು. ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯು ನಗರದ ರಾಷ್ಟ್ರೀಯ ಸೈನಿಕ ಸ್ಮಾರಕದಲ್ಲಿ ಹಮ್ಮಿಕೊಂಡಿದ್ದ 21ನೇ ಕಾರ್ಗಿಲ್ ವಿಜಯ್ ದಿವಸ್ ಕಾರ್ಯಕ್ರಮದಲ್ಲಿ ಹುತಾತ್ಮ ಯೋಧರಿಗೆ ಗೌರವ ಸಲ್ಲಿಸಿ, ಬಳಿಕ ಅವರು ಮಾತನಾಡಿ, 'ದೇಶಕ್ಕಾಗಿ ಮಡಿದ ಯೋಧರ ಸಾಹಸಗಾಥೆ ಯುವಪೀಳಿಗೆಗೆ ಎಂದಿಗೂ ಸ್ಫೂರ್ತಿ. ಅವರ ಶೌರ್ಯ ಮತ್ತು ತ್ಯಾಗಕ್ಕೆ ಸದಾ ಕೃತಜ್ಞರಾಗಿದ್ದೇವೆ. ಪ್ರವಾಹ, ಭೂಕಂಪ, ಸುನಾಮಿಯಂತಹ ವಿಪತ್ತಿನ ಸಂದರ್ಭಗಳಲ್ಲೂ ನಾಡಿನ ರಕ್ಷಣೆಗೆ ಧಾವಿಸುವ ಯೋಧರ ಸಾಹಸ ಅನುಕರಣೀಯ' ಎಂದರು.

'1999ರ ಕಾರ್ಗಿಲ್ ಯುದ್ಧದಲ್ಲಿ ರಾಜ್ಯದ 16 ಮಂದಿ ಸೇರಿ ಒಟ್ಟು 527 ಸೈನಿಕರು ಹುತಾತ್ಮರಾದರು. ಯುದ್ಧದಲ್ಲಿ ಹೋರಾಡಿದ ಮಾಜಿ ಸೈನಿಕರು ಹಾಗೂ ಹುತಾತ್ಮರಿಗೆ ಸರ್ಕಾರ ನೆರವು ನೀಡುತ್ತಿದೆ' ಎಂದರು. ಗೃಹ ಸಚಿವ ಬಸವರಾಜ ಬೊಮ್ಮಾಯಿ, ರಾಜ್ಯ ಪೊಲೀಸ್ ಮಹಾ ನಿರ್ದೇಶಕ ಪ್ರವೀಣ್ ಸೂದ್, ನಗರ ಪೊಲೀಸ್ ಆಯುಕ್ತ ಭಾಸ್ಕರ್ ರಾವ್ ಇದ್ದರು.

ರಾಜಕೀಯ ಮುಖಂಡರು ಟ್ವೀಟ್ ಮಾಡುವ ಮೂಲಕ ಹುತಾತ್ಮರಿಗೆ ಗೌರವ ಸೂಚಿಸಿದರು. 'ಯುದ್ಧ ಎಂದೆಂದೂ ನಡೆಯದಿರಲಿ, ಸೈನಿಕರ ಮನೆಯಲ್ಲಿ ಸಾವಿನ ರೋಧನೆ ಕೇಳದಿರಲಿ, ವಿಶ್ವದಲ್ಲಿ ಶಾಂತಿ–ಸಹಬಾಳ್ವೆ ಸದಾ ನೆಲೆಸಿರಲಿ, ಹುತಾತ್ಮರ ಕುಟುಂಬಗಳಿಗೆ ನನ್ನ ನಮನ' ಎಂದು ವಿಧಾನಸಭೆಯ ವಿರೋಧಪಕ್ಷದ ನಾಯಕ ಸಿದ್ದರಾಮಯ್ಯ ಟ್ವೀಟ್ ಮಾಡಿದರು.

'ನಮ್ಮ ಪ್ರದೇಶವನ್ನು ಕಾಪಾಡುವ ಮತ್ತು ಪುನಃ ಪಡೆದುಕೊಳ್ಳುವಲ್ಲಿ ಸೈನಿಕರ ಅಸಾಧಾರಣ ಧೈರ್ಯ ಮತ್ತು ತ್ಯಾಗಕ್ಕೆ ನಾನು ವಂದಿಸುತ್ತೇನೆ. 21 ವರ್ಷಗಳ ಹಿಂದಿನ ಅವರ ಸಾಧನೆಗೆ ಕೃತಜ್ಞರಾಗಿರಬೇಕು' ಎಂದು ಜೆಡಿಎಸ್ ವರಿಷ್ಠ ಎಚ್.ಡಿ.ದೇವೇಗೌಡ ಅವರು ಗೌರವ ಸೂಚಿಸಿದ್ದಾರೆ.

'ಕಾರ್ಗಿಲ್ ವಿಜಯ ದಿವಸ ಭಾರತದ ದಿಗ್ವಿಜಯದ ದಿನವೂ ಹೌದು. ಸವಾಲುಗಳ ನಡುವೆಯೂ ಸಾಹಸ ಮೆರೆದ ಭಾರತೀಯ ಸಶಸ್ತ್ರ ಪಡೆಗಳ ಬಲಿದಾನವನ್ನು ಹೆಮ್ಮೆಯಿಂದ ಸ್ಮರಿಸುತ್ತೇನೆ. ದೇಶಕ್ಕಾಗಿ ಮಡಿದ ಯೋಧರ ಕುಟುಂಬಗಳ ತ್ಯಾಗವನ್ನು ಮನಃಪೂರ್ವಕವಾಗಿ ಗೌರವಿಸುತ್ತೇನೆ' ಎಂದು ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕ ಹಾಗೂ ಮಾಜಿ ಮುಖ್ಯಮಂತ್ರಿ ಎಚ್.ಡಿ.ಕುಮಾರಸ್ವಾಮಿ ತಿಳಿಸಿದ್ದಾರೆ.

ಆಧಾರ:ಪ್ರಜಾವಾಣಿ, ದಿನಾಂಕ:27.07.2020